ಜೆಎಸ್ಎಸ್ ಮಹಾವಿದ್ಯಾಪೀಠ

# ಜೆಎಸ್ಎಸ್ ಮಹಿಳಾ ಕಾಲೇಜು

ಚಾಮರಾಜನಗರ ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 Fax: 08224-256051 jsscwk@gmail.com www. jsscwkgl.org

ಕೊಳ್ಳೇಗಾಲ: 9.3.2026 ಮಹಿಳೆಯರು ಕುಟುಂಬದ ಅಭಿವೃದ್ಧಿಯ ಜೊತೆಗೆ ಸಮಾಜದ ಅಭಿವೃದ್ಧಿಯಲ್ಲೂ ಪ್ರಮುಖವಾದ ಪಾತ್ರವಹಿಸುತ್ತಾರೆ. ಇಂದಿನ ಮಹಿಳೆಯರು ಶಿಕ್ಷಣ, ವಿಜ್ಞಾನ, ತಂತ್ರಜ್ಞಾನ, ಕ್ರೀಡೆ, ರಾಜಕೀಯ ಹಾಗೂ ಉದ್ಯಮ ಸೇರಿದಂತೆ ಅನೇಕ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ ಎಂದು ಮೈಸೂರಿನ ಕ್ಲೋಸೆಟ್‌ನ ಮಾಲೀಕರಾದ ಉದ್ಯಮಿ ಶ್ರೀಮತಿ ಪಲಾಶ್ ಬಿದ್ದಪ್ಪರವರು ತಿಳಿಸಿದರು.

ಜೆಎಸ್ಎಸ್ ಮಹಿಳಾ ಕಾಲೇಜಿನಲ್ಲಿ ಹಿರಿಯ ವಿದ್ಯಾರ್ಥಿನಿಯರ ವೇದಿಕೆ ವತಿಯಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿನಿಯರು ಉತ್ತಮ ಶಿಕ್ಷಣ ಪಡೆದು ತಮ್ಮ ಪ್ರತಿಭೆಯನ್ನು ವೃದ್ಧಿಸಿಕೊಳ್ಳಬೇಕು ಹಾಗೂ ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡಬೇಕೆಂದು ಪ್ರೋತ್ಸಾಹಿಸಿದರು. ಮಹಿಳಾ ಸಬಲೀಕರಣವು ಸಮಾಜದ ಸಮಗ್ರ ಅಭಿವೃದ್ಧಿಗೆ ಅತ್ಯಂತ ಅಗತ್ಯವಾಗಿದ್ದು, ಮಹಿಳೆಯರಿಗೆ ಸಮಾನ ಅವಕಾಶಗಳನ್ನು ನೀಡುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು.

2024-25ನೆಯ ಸಾಲಿನ ಮೈಸೂರು ವಿಶ್ವವಿದ್ಯಾನಿಲಯ ಬಿ.ಎ ಪದವಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳಿಸಿ 106ನೆಯ ಘಟಿಕೋತ್ಸವದಲ್ಲಿ ಒಂದು ಚಿನ್ನದ ಪದಕ ಹಾಗೂ ಎರಡು ನಗದು ಬಹುಮಾನ ಪಡೆದ ಕು. ಬಿ ಚಂದನ ರವರನ್ನು ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಕು. ಬಿ ಚಂದನ ರವರು ಮಾತನಾಡಿ ನನ್ನ ಈ ಯಶಸ್ಸಿಗೆ ಪ್ರೋತ್ಸಾಹಿಸಿದ ಪ್ರಾಂಶುಪಾಲರು, ಅಧ್ಯಾಪಕರು ಹಾಗೂ ಅಧ್ಯಾಪಕೇತರೆಲ್ಲರಿಗೂ ಕೃತಜ್ಞತೆಯನ್ನು ತಿಳಿಸಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಡಾ.ಹೆಚ್.ಎಸ್.ಕೊಂಗಳಪ್ಪ ನವರು ಮಾತನಾಡುತ್ತಾ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯು ಮಹಿಳೆಯರ ಮಹತ್ವವನ್ನು ಸಾರುವ ದಿನವಾಗಿದ್ದು ಅವರ ಎಲ್ಲಾ ಶ್ರಮ ಮತ್ತು ಪ್ರಯತ್ನಗಳಿಗೆ ಮೆಚ್ಚುಗೆಯನ್ನು ಪಡೆಯುವ ದಿನವಾಗಿದೆ. ಸಮಾನತೆಯ ಜೊತೆಗೆ ಮಹಿಳೆಯರು ಸದಾ ಮುಂದಿರುವುದು ದೇಶದ ಆರ್ಥಿಕ ಅಭಿವೃದ್ಧಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ವಿದ್ಯಾರ್ಥಿನಿ ವೇದಿಕೆಯ ಸಂಚಾಲರಾದ ಶ್ರೀಮತಿ ವಾಣಿ ಎನ್, ರವರು ಉಪಸ್ಥಿತರಿದ್ದರು.

ಮೈಸೂರಿನ ಕ್ಲೋಸೆಟ್‌ನ  ಮಾಲೀಕರಾದ ಉದ್ಯಮಿ ಶ್ರೀಮತಿ ಪಲಾಶ್ ಬಿದ್ದಪ್ಪರವರು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಚಿತ್ರದಲ್ಲಿ ಕು. ಬಿ ಚಂದನ, ಪ್ರಾಂಶುಪಾಲರಾದ ಡಾ.ಹೆಚ್.ಎಸ್.ಕೊಂಗಳಪ್ಪರವರು ಹಾಗೂ ಹಿರಿಯ ವಿದ್ಯಾರ್ಥಿನಿ ವೇದಿಕೆಯ ಸಂಚಾಲರಾದ  ಶ್ರೀಮತಿ ವಾಣಿ ಎನ್ ರವರನ್ನು ಕಾಣಬಹುದು.




ಕು. ಬಿ ಚಂದನ ರವರನ್ನು ಸನ್ಮಾನಿಸುತ್ತಿರುವುದು. ಚಿತ್ರದಲ್ಲಿ ಪ್ರಾಂಶುಪಾಲರಾದ ಡಾ.ಹೆಚ್.ಎಸ್.ಕೊಂಗಳಪ್ಪರವರು, ಶ್ರೀಮತಿ ಪಲಾಶ್ ಬಿದ್ದಪ್ಪರವರು ಹಾಗೂ ಹಿರಿಯ ವಿದ್ಯಾರ್ಥಿನಿ ವೇದಿಕೆಯ ಸಂಚಾಲರಾದ  ಶ್ರೀಮತಿ ವಾಣಿ ಎನ್ ರವರನ್ನು ಕಾಣಬಹುದು.

